ಓ.ಎಸ್.ನಂ252-2021

ಪಿ.ಡಬ್ಲು-೧

ದಿ: 15.01.2025ರಂದು 2ನೇ ವಾದಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

ಮುಖ್ಯ ವಿಚಾರಣೆ : ವಾದಿ ಪರವಾಗಿ ಶ್ರೀ ಟಿ.ಸಿ.ಎನ್. ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ವಂಶವೃಕ್ಷದ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ನಿ.ಪಿ.೧ ಎಂದು, ದೊಡ್ಡದುನ್ನಸಂದ್ರ ಗ್ರಾಮದ ಸರ್ವೆ ನಂ.45 ಹಿಸ್ಸಾ 6 ವಿಸ್ತೀರ್ಣ 0.02.04 ಗುಂಟೆ ಜಮೀನಿನ 2021-22 ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ನಿಪಿ.2 ಎಂದು, ದಿ: 1.04.1995 ರಿಂದ 31.03.2004 ನೇ ಸಾಲಿನವರೆಗಿನ ಜಮೀನು ಸರ್ವೆ ನಂ.45/2 ಹಿಸ್ಸಾ 0.2.04 ಗುಂಟೆ ಜಮೀನಿನ ಋಣ ಭಾರ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ನಿಪಿ.3 ಎಂದು, ದಿ: 9.07.1997 ರ ನೊಂದಾಯಿತ ಕ್ರಯ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ.4 ಎಂದು ಗುರುತಿಸಲಾಯಿತು.

**<u>ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಮುಂದೂಡಲಾಯಿತು.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ.ಸ.ಇದೆ.

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ಹೊಸಕೋಟೆ.